**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**<u>ಸಿ.ಸಿ. ಸಂಖ್ಯೆಃ 25/2022</u>**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : **ಎ 1. ಸೋಮಶೇಖರ**,
ತಂದೆ - ಲೇಟ್ ಶಿವಣ್ಣೇಗೌಡ,
ಸುಮಾರು **50** ವರ್ಷ ವಯಸ್ಸು,

**ಎ 2. ಸ್ವಾಮಿಗೌಡ**,
ತಂದೆ - ಲೇಟ್ ವೆಂಕಟೇಗೌಡ,
ಸುಮಾರು **65** ವರ್ಷ ವಯಸ್ಸು,

**ಎ 3. ಗೋವಿಂದೇಗೌಡ**,
ತಂದೆ - ಲೇಟ್ ಸಣ್ಣೇಗೌಡ,
ಸುಮಾರು **64** ವರ್ಷ ವಯಸ್ಸು,

ಎಲ್ಲರ ವಾಸಃ ಕರಿಮುದ್ದನಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**<u>ಆಪಾದನೆ</u>**

ಶ್ರೀಮತಿ ನಮ್ರತಾ ಎಸ್. ಹೊಸಮಠ, ಬಿ.ಎ., ಎಲ್.ಎಲ್.ಬಿ., ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ

1. ಹುಣಸೂರು ತಾಲ್ಲೂಕು, ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದು ಮದ್ದಾಪುರ ಎಲ್ಲೆಗೆ ಸೇರಿದ ಸರ್ವೆ ನಂ.16/4, 16/5 ರಲ್ಲಿ ಸಾಕ್ಷಿ-1 ರವರಿಗೆ ಸೇರಿದ 3.00 ಎಕರೆ ಜಮೀನು ಇದ್ದು, ಸದರಿ ಜಮೀನಿನ ಪಕ್ಕದಲ್ಲೇ ಬೇರೆಯವರ ಜಮೀನಿಗೆ ಹೋಗಲು 8 ಅಡಿ ದಾರಿ ಇರುತ್ತದೆ. 1 ನೇ ಆರೋಪಿಯಾದ ನೀವು ಸಾಕ್ಷಿ-1 ರವರ ಜಮೀನಿಗೆ ಸೇರಿದಂತೆ ತೂಬಿನಿಂದ ನೀರು ಗದ್ದೆಗಳಿಗೆ ಹೋಗಲು ಹಿಕ್ಕಲು ತೆಗೆದಿದ್ದು, ದಿಃ 09.11.2021 ರಂದು ಸಾಕ್ಷಿ-1 ರವರು ಸರ್ವೆ ಮಾಡಿಸಿ ಎಲ್ಲರ ಸಮಕ್ಷಮ ಹದ್ದುಬಸ್ತು ಮಾಡಿ ಹಿಕ್ಕಲನ್ನು ಮುಚ್ಚಿದ್ದರೂ ಕೂಡಾ 1 ನೇ ಆರೋಪಿಯಾದ ನೀವು ಸಾಕ್ಷಿ-1 ರವರ ಜಮೀನಿಗೆ ಹೋಗಿ ಮತ್ತೆ ಹಿಕ್ಕಲನ್ನು ತೆಗೆದಿದ್ದು, ದಿನಾಂಕ 16.11.2021 ರಂದು ಬೆಳಿಗ್ಗೆ 11.30 ಗಂಟೆ ಸಮಯದಲ್ಲಿ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಜಮೀನಿನ ಒಳಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **447** ಸಹವಾಚಕ ಕಲಂ **34 ರ** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ ಸಾಕ್ಷಿ-1 ಅವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಸಾಕ್ಷಿ-1 ರಿಂದ 3 ರವರು ಹಿಕ್ಕಲನ್ನು ಮುಚ್ಚುತ್ತಿರುವುದನ್ನು ತಡೆದು ಅವರಿಗೆ ಅಕ್ರಮ ತಡೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **341** ಸಹವಾಚಕ ಕಲಂ **34 ರ** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾಧ

ಎಸಗುವ ಸಮಾನ ಉದ್ದೇಶದಿಂದ, 1 ರಿಂದ 3 ನೇ ಆರೋಪಿಗಳಾದ ನೀವು ಸಾಕ್ಷಿ-1 ರಿಂದ 3 ರವರುಗಳಿಗೆ ಕೊಲೆ ಬೆದರಿಕೆ ಹಾಕಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **506** ಸಹವಾಚಕ ಕಲಂ **34 ರ** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ನಮ್ರತಾ ಎಸ್. ಹೊಸಮಠ)**

ದಿನಾಂಕಃ **08.07.2025**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.